ಕರ್ನಾಟಕ ಸರ್ಕಾರ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ

DKC-33011/112/2021

ಕನ್ನಡ ಭವನ, ಜೆ ಸಿ ರಸ್ತೆ,
ಬೆಂಗಳೂರು-02 ದಿನಾಂಕ:06.01.2022
080- 2222127I/22275540.

## ಪತ್ರಿಕಾ ಪ್ರಕಟಣೆ

ನಾಡಿನ ಕಲೆ, ಸಾಹಿತ್ಯ, ಸಂಗೀತ, ಜನಪದ, ನೃತ್ಯ, ನಾಟಕ ಸೇರಿದಂತೆ ಇತರೆ ಕಲಾಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 2021-22 ನೇ ಸಾಲಿನ ಸಾಮಾನ್ಯ, ವಿಶೇಷಘಟಕ ಮತ್ತು ಗಿರಿಜನ ಉಪಯೋಜನೆಯಡಿ

ಅ. ಕನ್ನಡ ಭಾಷೆ, ಸಾಹಿತ್ಯ, ಸಂಗೀತ, ನೃತ್ಯ, ಜಾನಪದ, ನಾಟಕ, ಯಕ್ಷಗಾನ, ಚಿತ್ರಕಲೆ,ಶಿಲ್ಪಕಲೆ ಮುಂತಾದ ಸೃಜನಶೀಲ ಕಲಾಪ್ರಕಾರಗಳಲ್ಲಿ ನಿರಂತರ ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸುತ್ತಿರುವ ಸಂಘ ಸಂಸ್ಥೆಗಳಿಗೆ ಪ್ರೋತ್ಸಾಹ ರೂಪದಲ್ಲಿ ಧನಸಹಾಯ.

ಆ. ಅಸಂಘಟಿತ ತಂಡಗಳು/ ಏಕವ್ಯಕ್ತಿ ಕಲಾವಿದರಿಗೆ ವಾದ್ಯಪರಿಕರ/ವೇಷಭೂಷಣ ಖರೀದಿಗೆ ಧನಸಹಾಯ

ಇ. ಚಿತ್ರಕಲೆ ಮತ್ತು ಶಿಲ್ಪಕಲೆಗಳ ಏಕವ್ಯಕ್ತಿ/ತಂಡದ ಕಲಾವಿದರಿಗೆ ಕಲಾಕೃತಿಗಳ ಪ್ರದರ್ಶನ ಏರ್ಪಡಿಸಲು ಧನಸಹಾಯ.

ಈ ಮೇಲೆ ತಿಳಿಸಿರುವ 03 ಯೋಜನೆಗಳಿಗೆ ಧನಸಹಾಯ ನೀಡಲು ಸೇವಾಸಿಂಧು **Sevasindhu.karnataka.gov.in** ಮುಖಾಂತರ ಅರ್ಜಿ ಸಲ್ಲಿಸಲು ದಿನಾಂಕ:25.12.2021 ರಿಂದ 8.01.2022 ರವರೆಗೆ ಕಾಲಾವಕಾಶ ನೀಡಿದ್ದು, ಸದರಿ ಕಾಲಾವಕಾಶದ ಅವಧಿಯನ್ನು ದಿನಾಂಕ:15.01.2022ರವರೆಗೆ ವಿಸ್ತರಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ:ಕಸಂವಾ:144:ಕಸಧ:2020 ದಿನಾಂಕ: 10.11.2020ರಲ್ಲಿನ ಮಾರ್ಗಸೂಚಿಯನ್ನು ಸೇವಾಸಿಂಧು ಪೋರ್ಟಲ್ ಹಾಗೂ ಇಲಾಖೆಯ ವೆಬ್‌ಸೈಟ್: www.kannadasiri.karnataka.gov.inನಲ್ಲಿ ಅಳವಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ **9380206704 / 8088304855** ಅನ್ನು ಹಾಗೂ ಆಯಾ ಜಿಲ್ಲಾ ಯೋಜನಾ ವ್ಯವಸ್ಥಾಪಕರು, ಸೇವಾ ಸಿಂಧು ಇವರನ್ನು ಸಂಪರ್ಕಿಸಿ. ಸಮಯ : ಬೆಳಗ್ಗೆ 9.00 ರಿಂದ ಸಂಜೆ 6.00ಗಂಟೆ.

(ನಿಗದಿತ ದಿನಾಂಕದ ನಂತರ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಅರ್ಜಿಗಳನ್ನು ನೇರವಾಗಿ ಇಲಾಖೆಯಲ್ಲಿ ಸ್ವೀಕರಿಸುವುದಿಲ್ಲ.)

6/1/2022

ನಿರ್ದೇಶಕರು
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಬೆಂಗಳೂರು.

Scanned by CamScanner